# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

**ಅಲ್ಪಸಂಖ್ಯಾತರ ನಿರ್ದೇಶನಾಲಯ,**
ನಂ.16ಸಿ, ಮೌಲಾನಾ ಅಬುಲ್ ಕಲಾಂ ಅಜಾದ್ ಭವನ,
ಮಿಲ್ಲರ್ ಟ್ಯಾಂಕ್ ಬಂಡ್ ರಸ್ತೆ, ವಸಂತನಗರ, ಬೆಂಗಳೂರು–560052.
Website: https://dom.karnataka.gov.in

**ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ**

## 2025–26ನೇ ಸಾಲಿಗೆ UPSC (Prelims Support Programme) ಪೂರ್ವಭಾವಿ ಪರೀಕ್ಷಾ ತರಬೇತಿ ಪಡೆಯಲು ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ ಪ್ರಕಟಣೆ.

### ಆನ್‌ಲೈನ್ ಅರ್ಜಿ

2025–26ನೇ ಸಾಲಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಬೆಂಗಳೂರಿನ ಹಜ್ ಭವನದಲ್ಲಿ ವಸತಿಯುತ 04 ತಿಂಗಳ UPSC (Prelims Support Programme) ಪೂರ್ವಭಾವಿ ಪರೀಕ್ಷಾ ತರಬೇತಿಯನ್ನು ಪ್ರತಿಷ್ಠಿತ ಸಂಸ್ಥೆಯ ಮೂಲಕ ನೀಡಲಾಗುತ್ತಿದ್ದು, ಸದರಿ ತರಬೇತಿಗೆ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

### ಸಮಯಾವಕಾಶ

**ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭದ ದಿನಾಂಕ:**

**04.03.2026.**

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:**

**09.03.2026.**

### ಅರ್ಹತೆಗಳು

- ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ).
- ಅಭ್ಯರ್ಥಿಯು ಕಳೆದ ಅಧಿಸೂಚನೆಗಳಲ್ಲಿ UPSC/KAS ಪೂರ್ವಭಾವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
- ಅಭ್ಯರ್ಥಿಯ ವಯೋಮಿತಿ ಕನಿಷ್ಠ 21 ಹಾಗೂ ಗರಿಷ್ಠ 35 ವರ್ಷಗಳು ಮೀರಿರಬಾರದು. (ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದೊಳಗೆ).

### ಅರ್ಜಿದಾರರಿಗೆ ಸೂಚನೆಗಳು

- **ಅರ್ಜಿದಾರರು ಅಲ್ಪಸಂಖ್ಯಾತರ ನಿರ್ದೇಶನಾಲಯದ ಜಾಲತಾಣ https://dom.karnataka.gov.in ಇಲ್ಲಿ ಲಭ್ಯವಿರುವ ಅರ್ಜಿ ನಮೂನೆಯಲ್ಲಿ ಮಾರ್ಗಸೂಚಿಗಳನ್ವಯ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.**
- **ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲಾ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990 ಇವರನ್ನು ಸಂಪರ್ಕಿಸಬಹುದು.**

ದಿನಾಂಕ : 04.03.2026
ಸ್ಥಳ : ಬೆಂಗಳೂರು

ಸಹಿ/–
ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು

ವಾಸಾಸಂಇ/ವಾಪ್ರ/5974/ಎಂಎಇ/2025–26